**Akashvani: Bangalore**
**National Bulletin In Kannada**
**02.05.2026: 7.35AM**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**02.05.2026: 7.35AM**

********

**ಮುಖ್ಯಾಂಶಗಳು :**

1. ಚುನಾವಣಾ ಆಯೋಗದ ಆದೇಶದ ಹಿನ್ನೆಲೆ; ಪಶ್ಚಿಮ ಬಂಗಾಳದ ಆಯ್ದ ೧೫ ಮತಗಟ್ಟೆಗಳಲ್ಲಿ ಇಂದು ಮರು ಮತದಾನ

2. ಎಲ್‌ಪಿಜಿ ಕಾಳಸಂತೆ ತಡೆಗೆ ೨ ಸಾವಿರದ ೩೦೦ಕ್ಕೂ ಹೆಚ್ಚು ಕಡೆ ದಾಳಿ; ಕೇಂದ್ರ ಸರ್ಕಾರ ಮಾಹಿತಿ

3. ಪಶ್ಚಿಮ ಏಷ್ಯಾ ಸಂಘರ್ಷ; ಇರಾನ್ ಸಲ್ಲಿಸಿದ್ದ ಪರಿಷ್ಕೃತ ಶಾಂತಿ ಪ್ರಸ್ತಾವನೆ ತಿರಸ್ಕರಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

4. ಆಫ್ರಿಕಾದ ಬೊಟ್ಸ್‌ವಾನಾದಲ್ಲಿ ವಿಶ್ವ ಅಥ್ಲೆಟಿಕ್ಸ್ ರಿಲೆ-೨೦೨೬ ಕ್ರೀಡಾಕೂಟ ಇಂದಿನಿಂದ ಆರಂಭ

5. ಐಪಿಎಲ್ ಟಿ-೨೦ ಕ್ರಿಕೆಟ್; ರಾಜಸ್ತಾನ್ ರಾಯಲ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ೭ ವಿಕೆಟ್ ಜಯ

**********

ಪಶ್ಚಿಮ ಬಂಗಾಳದ ೧೫ ಮತಗಟ್ಟೆಗಳಲ್ಲಿ ಮರುಮತದಾನ ನಡೆಸುವಂತೆ ಚುನಾವಣಾ ಆಯೋಗವು ಆದೇಶಿಸಿದೆ. ರಾಜ್ಯದ ಮಗ್ರಾಹತ್ ಪಶ್ಚಿಮ ವಿಧಾನಸಭಾ ಕ್ಷೇತ್ರದ ೧೧ ಮತಗಟ್ಟೆಗಳಲ್ಲಿ ಮತ್ತು ಡೈಮಂಡ್ ಹಾರ್ಬರ್ ವಿಧಾನಸಭಾ ಕ್ಷೇತ್ರದ ನಾಲ್ಕು ಮತಗಟ್ಟೆಗಳಲ್ಲಿ ಇಂದು ಮತದಾನ ನಡೆಯಲಿದೆ. ಬೆಳಿಗ್ಗೆ ೭ ರಿಂದ ಆರಂಭವಾಗಿರುವ ಮತದಾನ ಪ್ರಕ್ರಿಯೆ ಸಂಜೆ

೬ ರವರೆಗೆ ಜರುಗಲಿದೆ. ಸಂಬಂಧಪಟ್ಟ ಚುನಾವಣಾಧಿಕಾರಿಗಳು ಮತ್ತು ವೀಕ್ಷಕರಿಂದ ಬಂದ ವರದಿಗಳ ಆಧಾರದ ಮೇಲೆ ಆಯೋಗವು ಈ ನಿರ್ಧಾರ ಕೈಗೊಂಡಿದೆ. ಕಳೆದ ಬುಧವಾರ ಪಶ್ಚಿಮ ಬಂಗಾಳದ ಎರಡನೇ ಹಂತದ ವಿಧಾನಸಭಾ ಚುನಾವಣೆಯ ವೇಳೆ ಈ ಮತಗಟ್ಟೆಗಳಲ್ಲಿ ಮತದಾನ ನಡೆದಿತ್ತು. ವರದಿಗಳನ್ನು ಪರಿಶೀಲಿಸಿದ ಆಯೋಗ, ಈ ಮತಗಟ್ಟೆಗಳಲ್ಲಿ ನಡೆದ ಚುನಾವಣೆಯನ್ನು ಅಸಿಂಧು ಎಂದು ಘೋಷಿಸಿದೆ. ಈ ಕುರಿತು ಆಯೋಗವು ಪಶ್ಚಿಮ ಬಂಗಾಳದ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿದೆ.

**********

ಪಶ್ಚಮ ಏಷ್ಯಾದಲ್ಲಿನ ಪರಿಸ್ಥಿತಿಯ ನಡುವೆ, ಇಂಧನ ಪೂರೈಕೆ, ನೌಕಾಯಾನ ಕಾರ್ಯಾಚರಣೆ ಮತ್ತು ಭಾರತೀಯ ನಾಗರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುತ್ತಿರುವುದಾಗಿ ಕೇಂದ್ರ ಸರ್ಕಾರ ತಿಳಿಸಿದೆ. ಈ ಕುರಿತು ಮಾಹಿತಿ ನೀಡಿರುವ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ದೇಶಾದ್ಯಂತ ಎಲ್‌ಪಿಜಿ ಕಾಳಸಂತೆ ತಡೆಗೆ ೨ ಸಾವಿರದ ೩೦೦ಕ್ಕೂ ಹೆಚ್ಚು ಕಡೆ ದಾಳಿ ನಡೆಸಲಾಗಿದೆ ಎಂದು ತಿಳಿಸಿದೆ. ಪ್ರಸ್ತುತ ಆನ್‌ಲೈನ್ ಎಲ್‌ಪಿಜಿ ಸಿಲಿಂಡರ್ ಬುಕ್ಕಿಂಗ್ ಪ್ರಮಾಣ ಶೇಕಡ ೯ಲಕ್ಕೆ ಏರಿಕೆಯಾಗಿದ್ದು, ಸುಮಾರು ೪೯.೮ ಲಕ್ಷ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ. ದುರುಪಯೋಗ ತಡೆಯಲು ಜಾರಿಗೆ ತಂದಿರುವ ಡೆಲಿವರಿ ಅಥೆಂಟಿಕೇಶನ್ ಕೋಡ್ ಆಧಾರಿತ ವಿತರಣೆ ಶೇಕಡ ೯೩ಕ್ಕೆ ತಲುಪಿದೆ. ವಾಣಿಜ್ಯ ಎಲ್‌ಪಿಜಿ ಹಂಚಿಕೆಯನ್ನು ಬಿಕ್ಕಟ್ಟಿಗೂ ಮುನ್ನವಿದ್ದ ಅವಧಿಯ ಶೇಕಡ ೭೦ರಷ್ಟು ಮಟ್ಟಕ್ಕೆ ಹೆಚ್ಚಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ನೌಕಾಯಾನ ಕುರಿತು ಮಾಹಿತಿ ನೀಡಿರುವ ಸರ್ಕಾರ ಬಿಕ್ಕಟ್ಟಿನ ಪ್ರದೇಶದಲ್ಲಿರುವ ಎಲ್ಲಾ ಭಾರತೀಯ ನಾವಿಕರು ಸುರಕ್ಷಿತವಾಗಿದ್ದು, ಕಳೆದ ೨೪ ಗಂಟೆಗಳಲ್ಲಿ ಭಾರತೀಯ ಧ್ವಜ ಹೊತ್ತ ಹಡಗುಗಳಿಗೆ ಸಂಬಂಧಿಸಿದ ಯಾವುದೇ ಅಹಿತಕರ ಘಟನೆಗಳು ವರದಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

**********

ಜಾಗತಿಕ ಇಂಧನ ಬಿಕ್ಕಟ್ಟಿನ ನಡುವೆಯೂ ದೇಶದ ಇಂಧನ ಭದ್ರತೆಯನ್ನು ಬಲಪಡಿಸುವ ಉದ್ದೇಶದಿಂದ ಭಾರತ ತನ್ನ ಕಚ್ಚಾತೈಲ ಆಮದು ಮೂಲಗಳ ಸಂಖ್ಯೆಯನ್ನು ೨೭ ರಿಂದ ೪೧ಕ್ಕೆ ಏರಿಸಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್‌ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ. ದಕ್ಷಿಣ ಗುಜರಾತಿನಲ್ಲಿ ನಡೆದ ವೈಬ್ರೆಂಟ್ ಗುಜರಾತ್ ಪ್ರಾದೇಶಿಕ ಸಮಾವೇಶದಲ್ಲಿ ಮಾತನಾಡಿದ ಅವರು, ಇಂಧನ ಬಿಕ್ಕಟ್ಟನ್ನು ಸಮರ್ಥವಾಗಿ ನಿಭಾಯಿಸುವಲ್ಲಿ ದೀರ್ಘಕಾಲದ

ಯೋಜನೆ ಪ್ರಮುಖ ಪಾತ್ರ ವಹಿಸಿದೆ ಎಂದರು. ದೇಶೀಯ ಸಂಸ್ಕರಣಾಗಾರಗಳಲ್ಲಿ ಎಲ್‌ಪಿಜಿ ಉತ್ಪಾದನೆಯನ್ನು ಹೆಚ್ಚಿಸಲು ಸೂಚನೆ ನೀಡಲಾಗಿದ್ದು, ಇದರಿಂದ ದೇಶೀಯ ಉತ್ಪಾದನೆ ಶೇಕಡ ೬೦ರಷ್ಟು ವೃದ್ಧಿಯಾಗಿದೆ. ಪ್ರತಿ ದಿನದ ಉತ್ಪಾದನೆ ೩೬ ಸಾವಿರ ಮೆಟ್ರಿಕ್ ಟನ್‌ನಿಂದ ೫೪ ಸಾವಿರ ಮೆಟ್ರಿಕ್ ಟನ್‌ಗೆ ಏರಿಕೆಯಾಗಿದೆ ಎಂದು ತಿಳಿಸಿದರು.

**********

ಪಶ್ಚಿಮ ಏಷ್ಯಾದ ಸಂಘರ್ಷ ಅಂತ್ಯಗೊಳಿಸಲು ಇರಾನ್ ಸಲ್ಲಿಸಿದ್ದ ಪರಿಷ್ಕೃತ ಶಾಂತಿ ಪ್ರಸ್ತಾವನೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿರಸ್ಕರಿಸಿದ್ದಾರೆ. ಇರಾನ್ ಕೆಲವು ರಿಯಾಯಿತಿಗಳನ್ನು ನಿರೀಕ್ಷಿಸುತ್ತಿದೆ. ಆದರೆ ಪ್ರಸ್ತುತ ಇರುವ ಷರತ್ತುಗಳು ತಮಗೆ ತೃಪ್ತಿ ನೀಡಿಲ್ಲ ಎಂದು ಅಧ್ಯಕ್ಷ ತಿಳಿಸಿದ್ದು, ಇದು ರಾಜತಾಂತ್ರಿಕ ಬಿಕ್ಕಟ್ಟನ್ನು ಮತ್ತಷ್ಟು ಹೆಚ್ಚಿಸಿದೆ. ಮತ್ತೊಂದೆಡೆ ಲೆಬೆನಾನ್‌ನಲ್ಲಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಗೆ ಇಬ್ಬರು ಮಕ್ಕಳು ಸೇರಿದಂತೆ ೩೦ಕ್ಕೂ ಹೆಚ್ಚು ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಇದು ಅಮೆರಿಕ ಮಧ್ಯಸ್ಥಿಕೆಯ ಕದನವಿರಾಮ ಒಪ್ಪಂದದ ಉಲ್ಲಂಘನೆಯ ಆತಂಕ ಮೂಡಿಸಿದೆ. ಇದಕ್ಕೆ ಪ್ರತಿಯಾಗಿ ಹಿಜ್ಬುಲ್ಲಾ ಸಂಘಟನೆ ಇಸ್ರೇಲ್ ಮೇಲೆ ಡ್ರೋನ್ ದಾಳಿ ನಡೆಸಿದೆ. ಲೆಬೆನಾನ್ ಸಂಘರ್ಷದಲ್ಲಿ ಈವರೆಗೆ ಎರಡು ಸಾವಿರಕ್ಕೂ ಅಧಿಕ ಮಂದಿ ಮೃತಪಟ್ಟಿದ್ದು, ಲಕ್ಷಾಂತರ ಜನರು ನಿರಾಶ್ರಿತರಾಗಿದ್ದಾರೆ.

**********

೨೦೨೭ರ ಜನಗಣತಿಯ ಮೊದಲ ಹಂತದ ಭಾಗವಾಗಿ ಆಂಧ್ರಪ್ರದೇಶ, ಅರುಣಾಚಲಪ್ರದೇಶ, ಹರಿಯಾಣ, ಚಂಡಿಗಢ, ಮಧ್ಯಪ್ರದೇಶ ಮತ್ತು ಛತ್ತೀಸ್‌ಗಢಗಳಲ್ಲಿ ಮನೆ ಪಟ್ಟಿ ಮತ್ತು ಮನೆ ಗಣತಿ ಕಾರ್ಯ ಚಟುವಟಿಕೆ ಆರಂಭವಾಗಿದೆ. ಈ ರಾಜ್ಯಗಳಲ್ಲಿ ೧೫ ದಿನಗಳ ಸ್ವಯಂ ಗಣತಿ ಅವಧಿ ಮುಕ್ತಾಯವಾದ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ. ತರಬೇತಿ ಪಡೆದ ಗಣತಿದಾರರು ಇದೇ ೩೦ರ ವರೆಗೆ ಮನೆ ಮನೆಗೆ ಭೇಟಿ ನೀಡಿ, ಮಾಹಿತಿ ಸಂಗ್ರಹಿಸಲಿದ್ದಾರೆ. ಈ ನಡುವೆ, ದೆಹಲಿ ಮಹಾನಗರ ಪಾಲಿಕೆ ವ್ಯಾಪ್ತಿ, ರಾಜಸ್ತಾನ, ಮಹಾರಾಷ್ಟ್ರ, ಮೇಘಾಲಯ ಮತ್ತು ಜಾರ್ಖಂಡ್‌ನಲ್ಲಿ ಆನ್‌ಲೈನ್ ಮೂಲಕ ಸ್ವಯಂಗಣತಿ ಸೌಲಭ್ಯ ಆರಂಭವಾಗಿದ್ದು, ಇದೇ ೧೫ರ ವರೆಗೆ ಲಭ್ಯವಿರಲಿದೆ. ಈ ರಾಜ್ಯಗಳಲ್ಲಿ ಇದೇ ೧೬ರಿಂದ ಜೂನ್ ೧೪ರ ವರೆಗೆ ಮನೆ ಮನೆ ಗಣತಿ ನಡೆಯಲಿದೆ. ಬಿಹಾರದಲ್ಲಿಂದು ಸ್ವಯಂ ಗಣತಿ ಅವಧಿ ಪೂರ್ಣಗೊಳ್ಳಲಿದ್ದು, ನಾಳೆಯಿಂದ ಇದೇ ೩೧ರ ವರೆಗೆ ಮನೆ ಮನೆ ಗಣತಿ ನಡೆಯಲಿದೆ. ಈವರೆಗೆ ಇದೇ ಮೊದಲ ಬಾರಿಗೆ ಪರಿಚಯಿಸಲಾದ ಡಿಜಿಟಲ್ ಸ್ವಯಂ ಗಣತಿಗೆ ಉತ್ತಮ ಪ್ರತಿಕ್ರಿಯೆ

ವ್ಯಕ್ತವಾಗಿದ್ದು, ಸುಮಾರು ೮೨ ಲಕ್ಷ ಕುಟುಂಬಗಳು ಅಧಿಕೃತ ಪೋರ್ಟಲ್ ಮೂಲಕ ತಮ್ಮ ಮಾಹಿತಿಯನ್ನು ದಾಖಲಿಸಿವೆ.

**********

೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ೫೦ ದಿನಗಳ ಕ್ಷಣಗಣನೆಯ ಅಂಗವಾಗಿ ಮುರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ ತೆಲಂಗಾಣದಲ್ಲಿಂದು ಯೋಗ ಮಹೋತ್ಸವ - ೨೦೨೬ಅನ್ನು ಆಯೋಜಿಸಿದೆ. ಸಾರ್ವಜನಿಕರಲ್ಲಿ ಯೋಗದ ಕುರಿತು ಅರಿವು ಮೂಡಿಸಲು ಮತ್ತು ಸಾಮೂಹಿಕ ಭಾಗವಹಿಸುವಿಕೆಯನ್ನು ಉತ್ತೇಜಿಸಲು ಆಯುಷ್ಯ ಸಚಿವಾಲಯ ದೇಶಾದ್ಯಂತ ಹಮ್ಮಿಕೊಂಡಿರುವ ವಿವಿಧ ಕಾರ್ಯಕ್ರಮಗಳ ಭಾಗವಾಗಿ ಈ ಮಹೋತ್ಸವ ಆಯೋಜನೆ ಮಾಡಲಾಗಿದೆ. ಈ ಸಮಾರಂಭದಲ್ಲಿ ಭಾಗವಹಿಸುವ ಯೋಗಾಸಕ್ತರು ಏಕಕಾಲದಲ್ಲಿ ಭುಜಂಗಾಸನ ಪ್ರದರ್ಶನ ನೀಡುವ ಮೂಲಕ ಏಷ್ಯಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಐತಿಹಾಸಿಕ ದಾಖಲೆ ನಿರ್ಮಿಸಲು ಸಜ್ಜಾಗಿದ್ದಾರೆ. ಸಿಂಗಾಪುರ, ಚೀನಾ, ಬ್ರೆಜಿಲ್ ಸೇರಿದಂತೆ ವಿವಿಧ ದೇಶಗಳ ರಾಯಭಾರ ಕಚೇರಿ ಪ್ರತಿನಿಧಿಗಳು ವರ್ಚುವಲ್ ಆಗಿ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕೇಂದ್ರ ಸಚಿವರಾದ ಜಿ. ಕಿಶನ್ ರೆಡ್ಡಿ, ಪ್ರತಾಪರಾವ್ ಜಾಧವ್ ಮತ್ತು ಹಾರ್ಟ್‌ಫುಲ್‌ನೆಸ್ ಸಂಸ್ಥೆಯ ಅಧ್ಯಕ್ಷ ಕಮಲೇಶ್ ಡಿ. ಪಟೇಲ್ ಮಹೋತ್ಸವದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

**********

ಎರಡು ಸಾವಿರ ರೂಪಾಯಿ ಮುಖಬೆಲೆಯ ನೋಟುಗಳನ್ನು ಹಿಂಪಡೆಯುವ ಘೋಷಣೆ ಹೊರಬಿದ್ದ ಸುಮಾರು ಮೂರು ವರ್ಷಗಳ ನಂತರ ಚಲಾವಣೆಯಲ್ಲಿದ್ದ ಒಟ್ಟು ನೋಟುಗಳ ಪೈಕಿ ಶೇಕಡ ೯೮.೪೭ರಷ್ಟು ನೋಟುಗಳು ಮರಳಿ ಬಂದಿವೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ತಿಳಿಸಿದೆ.

ತನ್ನ ಕರೆನ್ಸಿ ನಿರ್ವಹಣಾ ಪ್ರಕ್ರಿಯೆಯ ಭಾಗವಾಗಿ ೨೦೨೩ರ ಮೇ ೧೯ರಂದು ಆರ್‌ಬಿಐ ಈ ನೋಟುಗಳ ಹಿಂಪಡೆಯುವಿಕೆಯನ್ನು ಪ್ರಕಟಿಸಿತ್ತು. ಆ ಸಮಯದಲ್ಲಿ ಚಲಾವಣೆಯಲ್ಲಿದ್ದ ಎರಡು ಸಾವಿರ ರೂಪಾಯಿ ಮುಖ ಬೆಲೆಯ ನೋಟುಗಳ ಒಟ್ಟು ಮೌಲ್ಯ ೩.೫೬ ಲಕ್ಷ ಕೋಟಿ ರೂಪಾಯಿ ಇತ್ತು. ೨೦೨೬ರ ಏಪ್ರಿಲ್ ೩೦ರ ವೇಳೆಗೆ ಈ ಮೊತ್ತ ೫ ಸಾವಿರದ ೪೫೧ ಕೋಟಿ ರೂಪಾಯಿಗೆ ಇಳಿಕೆಯಾಗಿದೆ.

**********

ಆಫ್ರಿಕಾದ ಬೊಟ್ಸ್‌ವಾನಾದ ಗ್ಯಾಬೋರಾನ್‌ನಲ್ಲಿ ಇಂದು ವಿಶ್ವ ಅಥ್ಲೆಟಿಕ್ಸ್ ರಿಲೆ-೨೦೨೬ ಕ್ರೀಡಾಕೂಟ ಆರಂಭವಾಗಲಿದ್ದು, ಇದರಲ್ಲಿ ಭಾರತದ ೨೧ ಸದಸ್ಯರ ತಂಡ ೫ ಸ್ಪರ್ಧೆಗಳಲ್ಲಿ ಕಣಕ್ಕಿಳಿಯಲಿದೆ. ನಾಳೆಯವರೆಗೆ ನಡೆಯಲಿರುವ ಈ ಕೂಟ ಆಫ್ರಿಕಾಖಂಡದಲ್ಲಿ ನಡೆಯುತ್ತಿರುವ ಮೊದಲ ವಿಶ್ವ ಅಥ್ಲೆಟಿಕ್ಸ್ ರಿಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಲಿದೆ. ಈ ಕೂಟದಲ್ಲಿ ಪುರುಷರ, ಮಹಿಳೆಯರ ಮತ್ತು ಮಿಶ್ರ ವಿಭಾಗದ ೪*೪೦೦ ಮೀಟರ್ ಹಾಗೂ ೪*೧೦೦ ಮೀಟರ್ ಸೇರಿದಂತೆ ಒಟ್ಟು ೬ ರಿಲೇ ಸ್ಪರ್ಧೆಗಳು ನಡೆಯಲಿದೆ.

**********

ಜೈಪುರದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ ರಾಜಸ್ತಾನ್ ರಾಯಲ್ಸ್ ವಿರುದ್ಧ ೭ ವಿಕೆಟ್‌ಗಳ ಜಯ ಸಾಧಿಸಿದೆ. ರಾಜಸ್ತಾನ ನೀಡಿದ್ದ ೨೨೫ ರನ್‌ಗಳ ಗೆಲುವಿನ ಗುರಿಯನ್ನು ಡೆಲ್ಲಿ ಕ್ಯಾಪಿಟಲ್ಸ್ ತಂಡ ೧೯.೧ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ಕ್ರಮಿಸಿ, ಗೆಲುವು ತನ್ನದಾಗಿಸಿಕೊಂಡಿತು. ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ

**********

ಡೆನ್ಮಾರ್ಕ್‌ನಲ್ಲಿ ನಡೆಯುತ್ತಿರುವ ಥಾಮಸ್ ಕಪ್ - ೨೦೨೬ ಬ್ಯಾಡ್ಮಿಂಟನ್ ಪಂದ್ಯಾವಳಿಯ ಸೆಮಿಫೈನಲ್ ಪಂದ್ಯದಲ್ಲಿಂದು ಭಾರತದ ಪುರುಷರ ತಂಡ ಫ್ರಾನ್ಸ್ ತಂಡವನ್ನು ಎದುರಿಸಲಿದೆ. ಕ್ವಾರ್ಟರ್ ಫೈನಲ್‌ನಲ್ಲಿ ಚೀನಾ ತೈಪೆ ವಿರುದ್ಧ ೩-೦ ಅಂತರದ ಜಯ ಸಾಧಿಸುವ ಮೂಲಕ ಭಾರತ ಅಂತಿಮ ೪ರ ಘಟ್ಟಕ್ಕೆ ಪ್ರವೇಶಿಸಲಿದೆ.

*****END*****